nt Pain* Women's Health



### ಅಂತರ್ ಕಾಲೇಜು ಮಹಿಳೆಯರ ಕಬಡ್ಡಿ ಪಂದ್ಯಾಟ ಉದ್ಘಾಟನೆ

# 'ಮಾನಸಿಕ ಸ್ಥೈರ್ಯ, ದೈಹಿಕ ಸದೃಢತೆಗೆ ಕ್ರೀಡೆ ಅಗತ್ಯ'



ಶಾಸಕ ಸುನಿಲ್ ಕುಮಾರ್ ದಿಪ ಬೆಳಗಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ಅಜೆಕಾರು, ಸೆ. 23: ಕ್ರೀಡೆಯಿಂದ ಮಾನಸಿಕ ಸ್ಥೈರ್ಯ ಹೆಚ್ಚಾಗುವ ಜತೆಗೆ ದೈಹಿಕವಾಗಿ ಸದೃಢಗೊಳ್ಳಬಹುದು ಎಂದು ಶಾಸಕ ಸುನಿಲ್ ಕುಮಾರ್ ಹೇಳಿದರು.

ಅವರು ಮಂಜುನಾಥ ಪೈ ಸ್ಮಾರಕ ಸರಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಮಂಗಳೂರು ವಿಶ್ವ ವಿದ್ಯಾನಿಲಯದ ಜಂಟಿ ಆಶ್ರಯದಲ್ಲಿ ಕಾರ್ಕಳ ಬಿಲ್ಲವ ಸಭಾಭವನದಲ್ಲಿ ನಡೆದ ಅಂತರ್ ಕಾಲೇಜು ಮಹಿಳಾ ಕಬಡ್ಡಿ ಪಮದ್ಯಾಟವನ್ನು ಸೆ.23ರಂದು ಉದ್ಘಾಟಿಸಿ ಮಾತನಾಡಿದರು.

ಕಾರ್ಕಳ ತಾಲೂಕಿನಲ್ಲಿ ಪ್ರಥಮ ಬಾರಿಗೆ ವಿವಿ ಮಟ್ಟದ ಕಬ್ಬಡಿ ಪಂದ್ಯಾಟ ನಡೆಯುತ್ತಿದ್ದು ಇದು ಇತರ ವಿದ್ಯಾರ್ಥಿಗಳಿಗೂ ಕ್ರೀಡೆಯತ್ತ ಸೆಳೆಯಲು ಸಹಕಾರಿ. ಕಬಡ್ಡಿ ಕ್ರೀಡೆ ತನ್ನದೇ ಆದ ವೈಶಿಷ್ಟ್ಯ ಹೊಂದಿದ್ದು ಕಾರ್ಕಳ ತಾಲೂಕಿನಿಂದ ಈಗಾಗಲೇ ಮಮತಾ ಪೂಜಾರಿ, ಸುಕೇಶ್ ಹೆಗ್ಡೆಯಂತಹ ಪ್ರತಿಭೆಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದ್ದಾರೆ. ಪ್ರತಿಯೋರ್ವ ವಿದ್ಯಾರ್ಥಿಯೂ ಕ್ರೀಡಾಸ್ಫೂರ್ತಿ ಮೈಗೂಡಿಸಿಕೊಂಡಾಗ ಭವಿಷ್ಯದಲ್ಲಿ ಉನ್ನತ ಸ್ಥಾನಕ್ಕೇರಲು ಸಾಧ್ಯ ಎಂದರು.

ಅಧ್ಯಕ್ಷತೆಯನ್ನು ಮಂಜುನಾಥ ಪೈ ಸ್ಮಾರಕ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಪ್ರೊ। ಶ್ರೀವರ್ಮ ಅರ್ಜಿ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಉದ್ಯಮಿ ಡಿ.ಆರ್. ರಾಜು, ಅಂತಾರಾಷ್ಟ್ರೀಯ ಕ್ರೀಡಾಪಟು ರೋಹಿತ್ ಕುಮಾರ್ ಕಟೀಲ್, ವಿಶ್ವವಿದ್ಯಾನಿಲಯದ ಪ್ರೊ। ಹರಿದಾಸ್ ಕೂಳೂರು, ವಿದ್ಯಾರ್ಥಿ ಮುಖಂಡ ವಿಘ್ನೇಶ್, ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ಕೃಷ್ಣ ಮೂರ್ತಿ ವೈದ್ಯ, ಕಾಲೇಜು ಅಭಿವೃದ್ಧಿ ಮಂಡಳಿಯ ಜಾರ್ಜ್ ಕ್ಯಾಸ್ತಲಿನೋ, ಪ್ರಭಾಕರ ಬಂಗೇರ ಉಪಸ್ಥಿತರಿದ್ದರು.

ಮಂಗಳೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ 43 ಕಾಲೇಜಿನ ವಿದ್ಯಾರ್ಥಿನಿಯರ ತಂಡವು ಪಂದ್ಯಾಟದಲ್ಲಿ ಪಾಲ್ಗೊಂಡಿತ್ತು. ಕೃಷ್ಣ ಮೂರ್ತಿ ಸ್ವಾಗತಿಸಿದರು. ಉಪನ್ಯಾಸಕರಾದ ಜ್ಯೋತಿ ಎಲ್.ಜೆ. ಕಾರ್ಯಕ್ರಮ ನಿರೂಪಿಸಿದರು. ವಿದ್ಯಾಧರ ಹೆಗ್ಡೆ ವಂದಿಸಿದರು.